# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1693 |
| ಸದಸ್ಯರ ಹೆಸರು | : | ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18-03-2022 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರೈತ ವಿದ್ಯಾನಿಧಿ ಯೋಜನೆ ಪ್ರಾರಂಭಗೊಂಡಿದ್ದು ಯಾವಾಗ; | ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮವನ್ನು ದಿನಾಂಕ: 07.08.2021 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ.<br><br>Mukhyamantri Raitha Vidyanidhi Programme is implementing from 07.08.2021. |
| ಆ) | ಈ ಯೋಜನೆಯಡಿಯಲ್ಲಿ ಎಷ್ಟು ರೈತರ ಮಕ್ಕಳು ಸ್ಕಾಲರ್ ಶಿಪ್ ಪಡೆದುಕೊಳ್ಳುತ್ತಿದ್ದಾರೆ: | ಈ ಯೋಜನೆಯಡಿಯಲ್ಲಿ ದಿನಾಂಕ:09.03.2022 ರವರೆಗೆ 605514 ರೈತರ ಮಕ್ಕಳು ವಿದ್ಯಾರ್ಥಿವೇತನ ಪಡೆದುಕೊಂಡಿದ್ದಾರೆ.<br><br>As on 09.03.2022, 605514 children of farmers have obtained scholarship under this programme. |
| ಇ) | ಇದುವರೆಗೂ ಸ್ವೀಕೃತವಾದ ಅರ್ಜಿಗಳ ಪೈಕಿ ತಿರಸ್ಕೃತಗೊಂಡ ಅರ್ಜಿಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು) | ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮದಡಿ ವಿದ್ಯಾರ್ಥಿವೇತನವನ್ನು ಅರ್ಹತೆ ಆಧಾರದ (Entitlement) ಮೇಲೆ ಹಾಗೂ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದಲ್ಲಿ ಅಂತಹ ಪ್ರಕರಣಗಳನ್ನೂ ಸಹ ಪರಿಗಣಿಸಿ ನೀಡಲಾಗುತ್ತಿದೆ. ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ ಪೋರ್ಟಲ್ ನಿಂದ ಕೃಷಿ ಇಲಾಖೆಗೆ ಅರ್ಹ ವಿದ್ಯಾರ್ಥಿಗಳ ದಾಖಲಾತಿಗಳನ್ನು ವಿದ್ಯಾರ್ಥಿವೇತನ ವರ್ಗಾವಣೆಗಾಗಿ ನೀಡಲಾಗುತ್ತಿದ್ದು, ಕೃಷಿ ಇಲಾಖೆಗೆ ವಿದ್ಯಾರ್ಥಿಗಳನ್ನು ತಿರಸ್ಕರಿಸಲು ಯಾವುದೇ ಅವಕಾಶವಿರುವುದಿಲ್ಲ.<br><br>Mukhyamantri Raitha Vidyanidhi scholarship is being sanctioning both on application and on entitlement basis. Records of eligible students are being given to Agriculture Department from State Scholarship portal maintained by E-governance Department. There is no provision for Agriculture Department for rejections. |
| ಈ) | ಯಾವ ಕಾರಣಕ್ಕಾಗಿ ಅರ್ಜಿಗಳು ತಿರಸ್ಕೃತಗೊಂಡಿದೆ: (ಸಂಪೂರ್ಣ ಮಾಹಿತಿ ನೀಡುವುದು) | |

| | | |
|---|---|---|
| ಉ) | ಈ ಯೋಜನೆಗೆ ವರ್ಷಕ್ಕೆ ಒದಗಿಸಲಾಗಿರುವ ಮೊತ್ತ ಎಷ್ಟು ಹಾಗೂ ಸ್ಕಾಲರ್ ಶಿಪ್ ಪಡೆಯಲು ಅನುಸರಿಸಬೇಕಾಗಿರುವ ಮಾನದಂಡವೇನು? | ಈ ಯೋಜನೆಗೆ 2021-22ನೇ ಸಾಲಿಗೆ 200.00 ಕೋಟಿ ಅನುದಾನವನ್ನು ಮೀಸಲಿರಿಸಲಾಗಿದೆ.<br><br>Rs. 200 crore is allocated for this programme during the year 2021-22.<br><br>ಮುಖ್ಯ ಮಂತ್ರಿ ರೈತ ವಿದ್ಯಾನಿಧಿಯಡಿ ವಿದ್ಯಾರ್ಥಿ ವೇತನ ಪಡೆಯಲು ಅನುಸರಿಸುವ ಮಾನದಂಡಗಳ ವಿವರ ಈ ಕೆಳಕಂಡಂತಿವೆ.<br><br>To get schalorship under Mukhyamanthri Raita Vidhya nidhi scheme, criterias are as mentioned below:<br><br>1. ರೈತ(Farmer) ಎಂದರೆ ರಾಜ್ಯದ ಯಾವುದೇ ಭಾಗದಲ್ಲಿ ಉಳುಮೆ ಮಾಡುವಂತಹ/ ಕೃಷಿ ಮಾಡುವಂತಹ ಜಮೀನನ್ನು ತನ್ನ ಹೆಸರಿನಲ್ಲಿ ಹೊಂದಿರುವಂತಹ ವ್ಯಕ್ತಿ<br>Farmer means any person having cultivable/ agricultural land in his name in any part of the State.<br>2. ಮಕ್ಕಳು, ಎಂದರೆ ಕಾನೂನಿನ ಪ್ರಕಾರ ದತ್ತು ಪಡೆದಿರುವ ಮಕ್ಕಳು ಸೇರಿದಂತೆ ಪೋಷಕ / ಪೋಷಕರ ಜೈವಿಕ ಸಂತತಿ. ಒಂದು ಪಕ್ಷ ಯಾವುದೇ ಮಕ್ಕಳಿಗೆ ಪೋಷಕ / ಪೋಷಕರು ಇಲ್ಲದೆ ಇದ್ದ ಸಂದರ್ಭದಲ್ಲಿ ಉಳುಮೆ ಮಾಡುವಂತಹ / ಕೃಷಿ ಮಾಡುವಂತಹ ಜಮೀನನ್ನು ಅವರು ಹೊಂದಿರತಕ್ಕದ್ದು;<br>Children, Means genetical off springs including legally adopted children. If children do not have parent / parents, they should have cultivable land / land suitable for agriculture.<br>3. ರೈತರ ಮಕ್ಕಳು ಸ್ನಾತಕೋತ್ತರ ಶಿಕ್ಷಣದವರೆಗೆ ವಿದ್ಯಾಭ್ಯಾಸ ಪಡೆಯಲು ಪ್ರೋತ್ಸಾಹಿಸಲು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ. ಈ ಕಾರ್ಯಕ್ರಮದಡಿ 8, 9 ಮತ್ತು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ ಹೆಣ್ಣುಮಕ್ಕಳು ಮತ್ತು ಎಸ್.ಎಸ್.ಎಲ್.ಸಿ / 10ನೇ ತರಗತಿಯನ್ನು ಪೂರೈಸಿರುವ ಹಾಗೂ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆ / ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಮಕ್ಕಳು ಈ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಿರುತ್ತಾರೆ. ವಿದ್ಯಾರ್ಥಿ ವೇತನವನ್ನು ವಾರ್ಷಿಕವಾಗಿ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct Benefit Transfer – DBT) ಪದ್ಧತಿಯ ಮೂಲಕ ವರ್ಗಾಯಿಸಲಾಗುವುದು.<br><br>Mukhyamantri Raitha Vidyanidhi Programme is implemented to encourage education of children of children farmer's up to post graduation. Girl students studying in 8th to 10th and all students who have completed Tenth or SSLC and studying in any registered educational institute/University in Karnataka and belonging to farmer's family are eligible to get scholarship under this programme. Scholarship is transferred to bank accounts of students annually through Direct Benefit Transfer mode. |

4. ರೈತ ಕುಟುಂಬದ ಎಲ್ಲಾ ಮಕ್ಕಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿ ವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ರೈತ ಕುಟುಂಬ ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರು.

   All children belonging to farmer's family are eligible to get scholarship under Mukhyamantri Raitha Vidya Nidhi Programme. For this purpose, Family is defined as family entered in 'KUTUMBA' software maintained by E- Governance Department.

5. ವಿದ್ಯಾರ್ಥಿಯು ಇತರೆ ಯಾವುದೇ ವಿದ್ಯಾರ್ಥಿವೇತನ ಪಡೆಯುತ್ತಿದ್ದರೂ 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಾಗುತ್ತಾರೆ.

   Students are eligible to get scholarship under Mukhyamantri Raitha Vidya Nidhi Programme in addition to any other scholarship.

6. 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನವನ್ನು ವಿತರಿಸುವ ಉದ್ದೇಶಕ್ಕೆ ರಾಜ್ಯದ ವಿವಿಧ ಇಲಾಖೆಗಳು ನಿರ್ವಹಿಸುತ್ತಿರುವ ಶೈಕ್ಷಣಿಕ ಹಾಗೂ ಇತರ ದತ್ತಾಂಶದ ಆಧಾರದ ಮೇಲೆ ಅರ್ಹ ಫಲಾನುಭವಿಗಳನ್ನು ಗುರುತಿಸಿ (On entitlement basis) ವಿದ್ಯಾರ್ಥಿವೇತನವನ್ನು ವಿತರಿಸುವುದು ಹಾಗೂ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ, ಅಂತಹ ಪ್ರಕರಣಗಳನ್ನು ಸಹ ಪರಿಗಣಿಸಿ ಅರ್ಹರಿಗೆ ವಿದ್ಯಾರ್ಥಿವೇತನವನ್ನು ನೇರ ನಗದು ವರ್ಗಾವಣೆ (Direct Benefit Transfer) ಮೂಲಕ ವರ್ಗಾಯಿಸುವುದು.

   For the purpose of Mukhyamantri Raitha Vidyanidhi Programme beneficiaries are identified using various educational and other databases maintained by various departments of State i.e., on entitlement basis and also applications submitted by students are also considered and scholarship is transferred to bank accounts of students through Direct Benefit Transfer mode.

7. ಪುನರಾವರ್ತಿತ ವಿದ್ಯಾರ್ಥಿಗಳು (Repeaters) ಅರ್ಹರಿರುವುದಿಲ್ಲ.

   Repeater students are not eligible.

ಸಂಖ್ಯೆ: AGRI-AML/74/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು